ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

KA/SK/DVG-049/2026-2028

Kannada Daily

Davangere **Volume :**1 **Issue:** 140 Sunday **15-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 140 ಭಾನುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

110 ವಿದ್ಯಾರ್ಥಿಗಳಿಗೆ ಒಂದೇ ಶೌಚಾಲಯ!

ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆಯೂ ಸಮರ್ಪಕವಾಗಿಲ್ಲ; ಮೂಲಸೌಕರ್ಯ ಕಲ್ಪಿಸಲು ರೈತ ಸಂಘದ ಆಗ್ರಹ

"ಮುಂಜಾನೆಯ ಮೆರಗು"

ಜಗಳೂರು ನ, 14– ತಾಲೂಕಿನ ಮುಗಿದ್ದರಾಗಿ ಹಳ್ಳಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದ ವಿದ್ಯಾರ್ಥಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಸುಮಾರು 110 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಈ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶೌಚಾಲಯ ವ್ಯವಸ್ಥೆ ಇಲ್ಲದೆ, ಒಂದೇ ಶೌಚಾಲಯವನ್ನು ಅವಲಂಬಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರೊಂದಿಗೆ ಸಮರ್ಪಕ ಕುಡಿಯುವ ನೀರು ಹಾಗೂ ವಿದ್ಯುತ್ ಸೌಲಭ್ಯಗಳ ಕೊರತೆಯೂ ವಿದ್ಯಾರ್ಥಿಗಳ ದೈನಂದಿನ ಬದುಕು ಮತ್ತು ಕಲಿಕೆಗೆ ಅಡ್ಡಿಯಾಗಿದೆ.

ಗ್ರಾಮೀಣ ಹಾಗೂ ಬಡ ಕುಟುಂಬಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ವಸತಿ, ಊಟ, ಆರೋಗ್ಯ ಮತ್ತು ಕಲಿಕಾ ವಾತಾವರಣ ಒದಗಿಸುವ ಉದ್ದೇಶದಿಂದ ಸರ್ಕಾರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಸ್ಥಾಪಿಸಿದೆ. ಆದರೆ, ಈ ಶಾಲೆಯಲ್ಲಿ ಅಗತ್ಯ ಮೂಲಸೌಕರ್ಯಗಳೇ ಸಮರ್ಪಕವಾಗಿ ಇಲ್ಲದಿರುವುದು ಶಿಕ್ಷಣ ವ್ಯವಸ್ಥೆಯ ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿಯಂತಾಗಿದೆ ಎಂಬ ಆರೋಪ ಕೇಳಿಬಂದಿದೆ.



110 ವಿದ್ಯಾರ್ಥಿಗಳಿಗೆ ಒಂದೇ ಶೌಚಾಲಯ

ಶಾಲೆಯಲ್ಲಿ ಸುಮಾರು 110 ವಿದ್ಯಾರ್ಥಿಗಳು ವಾಸ್ತವ್ಯವಿದ್ದು, ಅವರ ಬಳಕೆಗೆ ಒಂದೇ ಶೌಚಾಲಯ ಇರುವುದರಿಂದ ಬೆಳಗ್ಗೆ ಹಾಗೂ ಇತರ ಸಮಯಗಳಲ್ಲಿ ವಿದ್ಯಾರ್ಥಿಗಳು ಸರದಿಯಲ್ಲಿ ಕಾಯಬೇಕಾದ ಅನಿವಾರ್ಯತೆ ಎದುರಾಗಿದೆ. ಸ್ವಚ್ಛತೆ ಮತ್ತು ಆರೋಗ್ಯದ ದೃಷ್ಟಿಯಿಂದ ಶೌಚಾಲಯಗಳ ಸಂಖ್ಯೆ ಹೆಚ್ಚಿಸುವುದು ಅತ್ಯಗತ್ಯವಾಗಿದೆ. ಅದರಲ್ಲೂ ವಸತಿ ಶಾಲೆಯಲ್ಲಿ ಹಗಲು–ರಾತ್ರಿ ಉಳಿದುಕೊಂಡು ವಿದ್ಯಾಭ್ಯಾಸ ಮಾಡುವ ಮಕ್ಕಳಿಗೆ ಅಗತ್ಯ ಸಂಖ್ಯೆಯಲ್ಲಿ ಸ್ವಚ್ಛ ಹಾಗೂ ಸುರಕ್ಷಿತ ಶೌಚಾಲಯಗಳನ್ನು ಕಲ್ಪಿಸಬೇಕಿದೆ.

ಕುಡಿಯುವ ನೀರಿಗೂ ಪರದಾಟ

ವಿದ್ಯಾರ್ಥಿಗಳಿಗೆ ಅಗತ್ಯ ಪ್ರಮಾಣದಲ್ಲಿ ಕುಡಿಯುವ ನೀರು ಲಭ್ಯವಾಗುತ್ತಿಲ್ಲ ಎಂಬ ದೂರುಗಳಿವೆ. ಶುದ್ಧ ಕುಡಿಯುವ ನೀರು ಪ್ರತಿಯೊಬ್ಬ ವಿದ್ಯಾರ್ಥಿಯ ಮೂಲಭೂತ ಅಗತ್ಯವಾಗಿದ್ದು, ಸಮರ್ಪಕ ನೀರಿನ ವ್ಯವಸ್ಥೆ ಇಲ್ಲದಿರುವುದು ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಆತಂಕಕ್ಕೆ ಕಾರಣವಾಗಿದೆ. ಶಾಲೆಯಲ್ಲಿ ನಿರಂತರವಾಗಿ ಶುದ್ಧ ಕುಡಿಯುವ ನೀರು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳಬೇಕಿದೆ.

ವಿದ್ಯುತ್ ದೀಪಗಳ ವ್ಯವಸ್ಥೆಯೂ ಸಮರ್ಪಕವಾಗಿಲ್ಲ

ವಿದ್ಯುತ್ ದೀಪಗಳ ಸಮರ್ಪಕ ವ್ಯವಸ್ಥೆ ಇಲ್ಲದಿರುವುದರಿಂದ ರಾತ್ರಿ ವೇಳೆಯಲ್ಲಿ ವಿದ್ಯಾರ್ಥಿಗಳ ಅಧ್ಯಯನಕ್ಕೆ ತೊಂದರೆಯಾಗುತ್ತಿದೆ. ವಸತಿ ಶಾಲೆಯ ವಿದ್ಯಾರ್ಥಿಗಳು ನಿಗದಿತ ವೇಳಾಪಟ್ಟಿಯಂತೆ ಅಭ್ಯಾಸ ಮಾಡಬೇಕಾಗಿರುವುದರಿಂದ ಕೊಠಡಿಗಳು ಹಾಗೂ ಅಧ್ಯಯನ ಸ್ಥಳಗಳಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆ ಕಲ್ಪಿಸುವುದು ಅಗತ್ಯವಾಗಿದೆ.

ಒಟ್ಟಾರೆ, ವಿದ್ಯಾರ್ಥಿಗಳಿಗೆ ಅಗತ್ಯವಾದ ಶೌಚಾಲಯ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಹಲವು ಮೂಲಸೌಕರ್ಯಗಳ ಕೊರತೆ ಕಂಡುಬಂದಿದ್ದು, ಸಂಬಂಧಪಟ್ಟ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಪರಿಶೀಲಿಸಿ ಸಮಸ್ಯೆಗಳನ್ನು ತಕ್ಷಣ ಪರಿಹರಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ.

ಎರಡು ದಿನಗಳಲ್ಲಿ ಸಮಸ್ಯೆ ಪರಿಹರಿಸಲು ಆಗ್ರಹ

ವಿದ್ಯಾರ್ಥಿಗಳು ಯಾವುದೇ ರೀತಿಯ ತೊಂದರೆ ಇಲ್ಲದೆ ಉತ್ತಮ ವಾತಾವರಣದಲ್ಲಿ ಶಿಕ್ಷಣ ಪಡೆಯುವಂತಾಗಬೇಕು. ಶಾಲೆಯಲ್ಲಿನ ಶೌಚಾಲಯ, ಕುಡಿಯುವ ನೀರು, ವಿದ್ಯುತ್ ಸೇರಿದಂತೆ ಎಲ್ಲಾ ಮೂಲಭೂತ ಸೌಕರ್ಯಗಳ ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಇನ್ನೆರಡು ದಿನಗಳೊಳಗಾಗಿ ಬಗೆಹರಿಸಬೇಕು. ಕೇವಲ ಭರವಸೆ ನೀಡದೆ ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ ತಕ್ಷಣ ಕಾರ್ಯಪ್ರವೃತ್ತರಾಗಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ವಾಸುದೇವ ಮೇಟಿ ಬಣದ ದಾವಣಗೆರೆ ಜಿಲ್ಲಾಧ್ಯಕ್ಷ ಗುಮ್ಮನೂರು ಬಸವರಾಜ್ ಆಗ್ರಹಿಸಿದ್ದಾರೆ.



ಮಕ್ಕಳ ಶಿಕ್ಷಣದ ವಿಚಾರದಲ್ಲಿ ನಿರ್ಲಕ್ಷ್ಯ ಸಲ್ಲದು

ವಸತಿ ಶಾಲೆಗಳು ಕೇವಲ ಮಕ್ಕಳಿಗೆ ಆಶ್ರಯ ನೀಡುವ ಕಟ್ಟಡಗಳಲ್ಲ. ಅವು ಮಕ್ಕಳ ಭವಿಷ್ಯ ರೂಪಿಸುವ ಜ್ಞಾನ ದೇಗುಲಗಳಾಗಿವೆ. ಇಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಪ್ರತಿಯೊಬ್ಬ ವಿದ್ಯಾರ್ಥಿಗೂ ಉತ್ತಮ ಶಿಕ್ಷಣದ ಜೊತೆಗೆ ಆರೋಗ್ಯಕರ ವಾತಾವರಣ, ಸ್ವಚ್ಛತೆ, ಸುರಕ್ಷತೆ ಮತ್ತು ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಜವಾಬ್ದಾರಿಯಾಗಿದೆ.

ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡದೆ ತಕ್ಷಣ ಸಮಸ್ಯೆಗಳನ್ನು ಪರಿಹರಿಸಬೇಕು. ವಿದ್ಯಾರ್ಥಿಗಳ ಸಂಕಷ್ಟದ ಧ್ವನಿಗೆ ಅಧಿಕಾರಿಗಳು ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ವಾಸುದೇವ ಮೇಟಿ ಬಣದ ಜಗಳೂರು ತಾಲೂಕು ಅಧ್ಯಕ್ಷ ಕುಮಾರ ಒತ್ತಾಯಿಸಿದ್ದಾರೆ.

ಗುತ್ತಿದುರ್ಗ ಸರ್ಕಾರಿ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಸಂಭ್ರಮ

"ಮುಂಜಾನೆಯ ಮೆರಗು"

ಜಗಳೂರು ನ, 14– ತಾಲೂಕಿನ ಗುತ್ತಿದುರ್ಗ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಶನಿವಾರ ಮಕ್ಕಳ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಹಾಗೂ ಮಕ್ಕಳ ಪ್ರೀತಿಯ ಚಾಚಾ ನೆಹರು ಎಂದೇ ಖ್ಯಾತರಾಗಿದ್ದ ಪಂಡಿತ್ ಜವಾಹರಲಾಲ್ ನೆಹರು ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ಸಮರ್ಪಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕರು ಮಕ್ಕಳಿಗೆ ಮಕ್ಕಳ ದಿನಾಚರಣೆಯ ಮಹತ್ವ, ನೆಹರು ಅವರ ಜೀವನಾದರ್ಶ ಹಾಗೂ ಮಕ್ಕಳ ಮೇಲಿನ ಅವರ ಅಪಾರ ಪ್ರೀತಿಯ ಕುರಿತು ತಿಳಿಸಿದರು. ಮಕ್ಕಳಿಗೆ ಉತ್ತಮ ಶಿಕ್ಷಣ, ಶಿಸ್ತು, ಸಂಸ್ಕಾರ ಹಾಗೂ ಆತ್ಮವಿಶ್ವಾಸದ ಮೂಲಕ ಭವಿಷ್ಯದಲ್ಲಿ ಉತ್ತಮ ನಾಗರಿಕರಾಗುವಂತೆ ಸಲಹೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮಕ್ಕಳಲ್ಲಿ ಸಂಭ್ರಮ ಮೂಡಿಸಿದ ಮಕ್ಕಳ ದಿನಾಚರಣೆ

"ಮುಂಜಾನೆಯ ಮೆರಗು"

ಜಗಳೂರು ನ, 14– ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯಲ್ಲಿ ಶನಿವಾರ ಮಕ್ಕಳ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನದ ಸ್ಮರಣಾರ್ಥ ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪನಮನ ಸಲ್ಲಿಸಲಾಯಿತು. ಮಕ್ಕಳ ಮೇಲಿನ ಅಪಾರ ಪ್ರೀತಿ ಮತ್ತು ಕಾಳಜಿಯಿಂದ ಚಾಚಾ ನೆಹರು ಎಂದೇ ಪ್ರಸಿದ್ಧರಾಗಿದ್ದ ನೆಹರು ಅವರ ಆದರ್ಶ ಹಾಗೂ ಮಕ್ಕಳ ಶಿಕ್ಷಣದ ಕುರಿತಾದ ಅವರ ಆಶಯಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಮಕ್ಕಳ ದಿನಾಚರಣೆಯಲ್ಲಿ ಭಾಗವಹಿಸಿದ್ದರು.

ಎಸ್.ಕೆ.ಆರ್.ಎಸ್.ಎಚ್. ಪ್ರೌಢಶಾಲೆಯಲ್ಲಿ ಮಕ್ಕಳ ದಿನಾಚರಣೆ

"ಮುಂಜಾನೆಯ ಮೆರಗು"

ಜಗಳೂರು ನ, 14– ತಾಲೂಕಿನ ಕಲ್ಲೇದೇವರಪುರ ಗ್ರಾಮದ ಎಸ್. ಕೆ.ಆರ್.ಎಸ್.ಎಚ್. ಪ್ರೌಢಶಾಲೆಯಲ್ಲಿ ಶನಿವಾರ ಮಕ್ಕಳ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ, ಮಕ್ಕಳ ಪ್ರೀತಿಯ ಚಾಚಾ ಎಂದೇ ಖ್ಯಾತರಾಗಿದ್ದ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವನ್ನು ಸ್ಮರಿಸಲಾಯಿತು. ಈ ಸಂದರ್ಭದಲ್ಲಿ ಶಾಲಾ ಆವರಣದಲ್ಲಿ ನೆಹರು ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಲಾಯಿತು.

ಮಕ್ಕಳ ಮೇಲಿನ ನೆಹರು ಅವರ ಅಪಾರ ಪ್ರೀತಿ, ಮಕ್ಕಳ ಶಿಕ್ಷಣದ ಮಹತ್ವ ಹಾಗೂ ದೇಶದ ಭವಿಷ್ಯ ರೂಪಿಸುವಲ್ಲಿ ವಿದ್ಯಾರ್ಥಿಗಳ ಪಾತ್ರವನ್ನು ಸ್ಮರಿಸಲಾಯಿತು. ಮಕ್ಕಳಲ್ಲಿ ಉತ್ತಮ ಶಿಕ್ಷಣ, ಶಿಸ್ತು, ಸಂಸ್ಕಾರ ಮತ್ತು ದೇಶಪ್ರೇಮದ ಮನೋಭಾವ ಬೆಳೆಸುವ ಅಗತ್ಯದ ಕುರಿತು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು, ಮಕ್ಕಳ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

ಮಕ್ಕಳ ಮುಖದಲ್ಲಿ ಸಂತಸ ಮೂಡಿಸಿದ ಮಕ್ಕಳ ದಿನಾಚರಣೆ

"ಮುಂಜಾನೆಯ ಮೆರಗು"

ಜಗಳೂರು ನ, 14– ತಾಲೂಕಿನ ಚಿಕ್ಕ ಉಜ್ಜನಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಶನಿವಾರ ಮಕ್ಕಳ ದಿನಾಚರಣೆಯನ್ನು ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವನ್ನು ಸ್ಮರಿಸಲಾಯಿತು. ಮಕ್ಕಳ ಮೇಲಿನ ಅಪಾರ ಪ್ರೀತಿ ಮತ್ತು ಕಾಳಜಿಯಿಂದಾಗಿ ಅವರ ಜನ್ಮದಿನವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂಬುದನ್ನು ಈ ಸಂದರ್ಭದಲ್ಲಿ ಅಂಗನವಾಡಿ ಮಕ್ಕಳಿಗೆ ತಿಳಿಸಲಾಯಿತು. ಶುಭಾಶಯಗಳನ್ನು ತಿಳಿಸಿ, ಅವರಲ್ಲಿ ಸಂತಸ ಮತ್ತು ಉತ್ಸಾಹ ಮೂಡಿಸುವ ವಾತಾವರಣ ನಿರ್ಮಿಸಲಾಯಿತು. ಮಕ್ಕಳಿಗೆ ಆಟ, ಪಾಠ ಹಾಗೂ ವಿವಿಧ ಚಟುವಟಿಕೆಗಳ ಮೂಲಕ ದಿನದ ಮಹತ್ವವನ್ನು ತಿಳಿಸಲಾಯಿತು. ಮಕ್ಕಳ ನಗು, ಸಂಭ್ರಮ ಹಾಗೂ ಉತ್ಸಾಹದಿಂದ ಅಂಗನವಾಡಿ ಕೇಂದ್ರದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಈ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರದ ಮಕ್ಕಳು, ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಉಪಸ್ಥಿತರಿದ್ದರು.

ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ, ಶಿಸ್ತು ಬೆಳೆಸುವುದು ಅಗತ್ಯ

"ಮುಂಜಾನೆಯ ಮೆರಗು"

ಜಗಳೂರು ನ, 14– ತಾಲೂಕಿನ ಚಿಕ್ಕಮಲ್ಲನಹೋಳೆ ಗ್ರಾಮದ ಬಸವೇಶ್ವರ ಪ್ರೌಢಶಾಲೆಯಲ್ಲಿ ಶನಿವಾರ ಮಕ್ಕಳ ದಿನಾಚರಣೆಯನ್ನು ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಹಾಗೂ ಮಕ್ಕಳ ನೆಚ್ಚಿನ ನಾಯಕ ಎಂದೇ ಖ್ಯಾತರಾದ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನದ ಸ್ಮರಣಾರ್ಥವಾಗಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ವಿಶೇಷ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ನೆಹರು ಅವರ ಜೀವನ, ಆದರ್ಶಗಳು ಹಾಗೂ ಮಕ್ಕಳ ಮೇಲಿದ್ದ ಅಪಾರ ಪ್ರೀತಿಯನ್ನು ಸ್ಮರಿಸಲಾಯಿತು. ಮಕ್ಕಳೇ ದೇಶದ ಭವಿಷ್ಯದ ಪ್ರಜೆಗಳಾಗಿದ್ದು, ಅವರಿಗೆ ಉತ್ತಮ ಶಿಕ್ಷಣ, ಸಂಸ್ಕಾರ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆ, ಆಸಕ್ತಿ ಮತ್ತು ಸೃಜನಶೀಲತೆಯನ್ನು ಬೆಳೆಸಿಕೊಂಡು ಭವಿಷ್ಯದಲ್ಲಿ ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು ಎಂಬ ಆಶಯವನ್ನು ವ್ಯಕ್ತಪಡಿಸಲಾಯಿತು.

ಮಕ್ಕಳ ದಿನಾಚರಣೆಯು ಮಕ್ಕಳ ಹಕ್ಕುಗಳು, ಶಿಕ್ಷಣದ ಮಹತ್ವ ಹಾಗೂ ಅವರ ಸರ್ವತೋಮುಖ ಬೆಳವಣಿಗೆಯ ಕುರಿತು ಜಾಗೃತಿ ಮೂಡಿಸುವ ಮಹತ್ವದ



ದಿನವಾಗಿದೆ. ಮಕ್ಕಳಲ್ಲಿ ಆತ್ಮವಿಶ್ವಾಸ, ಶಿಸ್ತು, ಪರಸ್ಪರ ಸಹಕಾರ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುವ ಮೂಲಕ ಅವರ ಉಜ್ವಲ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಬೇಕು ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ರಸ್ತೆಮಾಚಿಕೆರೆ ಸರ್ಕಾರಿ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಸಂಭ್ರಮ

"ಮುಂಜಾನೆಯ ಮೆರಗು"

ಜಗಳೂರು ನ, 14– ತಾಲೂಕಿನ ರಸ್ತೆಮಾಚಿಕೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಶನಿವಾರ ಮಕ್ಕಳ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವನ್ನು ಸ್ಮರಿಸಿ, ಅವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಪುಷ್ಪಾರ್ಚನೆ ಮಾಡಲಾಯಿತು.

ಈ ಸಂದರ್ಭದಲ್ಲಿ ನೆಹರು ಅವರು ಮಕ್ಕಳ ಬಗ್ಗೆ ಹೊಂದಿದ್ದ ಅಪಾರ ಪ್ರೀತಿ, ಕಾಳಜಿ ಹಾಗೂ ಮಕ್ಕಳ ಶಿಕ್ಷಣಕ್ಕೆ ನೀಡಿದ ಮಹತ್ವವನ್ನು ಸ್ಮರಿಸಲಾಯಿತು. ಮಕ್ಕಳೇ ದೇಶದ ಭವಿಷ್ಯದ ಪ್ರಜೆಗಳಾಗಿದ್ದು, ಅವರಿಗೆ ಗುಣಮಟ್ಟದ ಶಿಕ್ಷಣ, ಉತ್ತಮ ಸಂಸ್ಕಾರ ಹಾಗೂ ನೈತಿಕ ಮೌಲ್ಯಗಳನ್ನು ಕಲಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂಬ ಸಂದೇಶವನ್ನು ಸಾರಲಾಯಿತು.

ಮಕ್ಕಳ ದಿನಾಚರಣೆಯ ಅಂಗವಾಗಿ ಶಾಲೆಯಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿದ್ದು, ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸಂಭ್ರಮದಿಂದ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Editor, Publisher & Owner of the News Paper: RAVIKUMARA J.O, MUNJANEYA MERAGU, JCR BADAVANE, Jagalur- 577-528, Davanagere (D)Karnataka, Printed by: MALLIKARJUNAPPA H G. Printed at: SHIVA MEDIA HOUSE, No.900/A2, Opp-Banashankari Temple Arch, Main Roan, Davanagere, Karnataka-577004.

ಕೊಂಡಜ್ಜಿ ಗ್ರಾಮದಲ್ಲಿ ನೂತನ ಸಮುದಾಯ ಭವನ ಉದ್ಘಾಟನೆ

ಹರಿಹರ ಕ್ಷೇತ್ರದ ಕೆರೆಗಳ ಭರ್ತಿಗೆ 200 ಕೋಟಿ ಯೋಜನೆ ಅನುಷ್ಠಾನಕ್ಕೆ ಪ್ರಯತ್ನ: ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ

"ಮುಂಜಾನೆಯ ಮೆರಗು"

ಹರಿಹರ ನ, 13– ತಾಲ್ಲೂಕಿನ ಕೊಂಡಜ್ಜಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಸಮುದಾಯ ಭವನವನ್ನು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಮಾಜಿ ಕೇಂದ್ರ ಹಾಗೂ ರಾಜ್ಯ ಸಚಿವ ದಿವಂಗತ ಕೊಂಡಜ್ಜಿ ಬಸಪ್ಪನವರ 44ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಅವರ ಸಮಾಧಿ ಸ್ಥಳಕ್ಕೆ ಪುಷ್ಪನಮನ ಸಲ್ಲಿಸಿದರು.



ಬಳಿಕ ಮಾತನಾಡಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ, ಕೊಂಡಜ್ಜಿ ಗ್ರಾಮದೊಂದಿಗೆ ಬಾಲ್ಯದಿಂದಲೂ ವಿಶೇಷ ಒಡನಾಟವಿದೆ. ವಿದ್ಯಾರ್ಥಿ ಜೀವನದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ರಾಜ್ಯ ಪುರಸ್ಕಾರ ಪಡೆದ ಅನುಭವ ಇಂದಿಗೂ ಜೀವನಕ್ಕೆ ಮಾರ್ಗದರ್ಶನ ನೀಡುತ್ತಿದೆ ಎಂದು ಸ್ಮರಿಸಿದರು.

ಮಕ್ಕಳಲ್ಲಿ ಶಿಸ್ತು, ಸೇವಾ ಮನೋಭಾವ, ನಾಯಕತ್ವ ಗುಣ, ಆತ್ಮವಿಶ್ವಾಸ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಚಳವಳಿಯ ಪಾತ್ರ ಮಹತ್ವದ್ದಾಗಿದೆ. ಇಂತಹ ಚಟುವಟಿಕೆಗಳು ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ದಿವಂಗತ ಕೊಂಡಜ್ಜಿ ಬಸಪ್ಪನವರು ಸಾರ್ವಜನಿಕ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆ ಸ್ಮರಣೀಯವಾಗಿದೆ. ಅವರ ಕುಟುಂಬವು ತಲೆಮಾರುಗಳಿಂದ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ವೇಳೆ ಹರಿಹರ ಕ್ಷೇತ್ರದ ಅಭಿವೃದ್ಧಿ ಕುರಿತು ಮಾತನಾಡಿದ ಅವರು, ಕ್ಷೇತ್ರದ ಕೊನೆಭಾಗದ ರೈತರ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಬೈರನಪಾದ ಏತ ನೀರಾವರಿ ಯೋಜನೆ ಹಾಗೂ ಕೊಂಡಜ್ಜಿ ಕೆರೆ ಸೇರಿದಂತೆ ವಿವಿಧ ಕೆರೆಗಳನ್ನು ತುಂಬಿಸುವ ಸುಮಾರು 200 ಕೋಟಿ ಮೊತ್ತದ ಪ್ರಸ್ತಾವಿತ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರದ ಮಟ್ಟದಲ್ಲಿ ನಿರಂತರ ಪ್ರಯತ್ನ ನಡೆಸಲಾಗುವುದು ಎಂದರು.



ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಎಲ್ಲ ಜನಪ್ರತಿನಿಧಿಗಳು ಹಾಗೂ ವಿವಿಧ ಪಕ್ಷಗಳ ಮುಖಂಡರು ಪಕ್ಷಾತೀತವಾಗಿ ಕೈಜೋಡಿಸಬೇಕು. ಎಲ್ಲರ ಸಹಕಾರದೊಂದಿಗೆ ಹರಿಹರ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಬದ್ಧರಾಗಿರುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಸಚಿವ ಕೆ.ಎಸ್.ಬಸವಂತಪ್ಪ, ಶಾಸಕ ಬಿ.ಪಿ.ಹರೀಶ್, ವಿಧಾನ ಪರಿಷತ್ ಮಾಜಿ ಸದಸ್ಯ ಮೋಹನ್ ಕೊಂಡಜ್ಜಿ, ಷಣ್ಮುಖಪ್ಪ, ಡಾ.ಗುರುಮೂರ್ತಿ, ವೀರಭದ್ರಪ್ಪ, ನಿಖಿಲ್ ಕೊಂಡಜ್ಜಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹನುಮಂತಪ್ಪ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು, ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಜನರ ಬಳಿಗೆ ಸರ್ಕಾರವೇ ಬಂದಿರುವ ಪ್ರಜಾಸೇವಾ ಆಂದೋಲನದ ಸದುಪಯೋಗ ಪಡೆದುಕೊಳ್ಳಿ: ಶಾಸಕ ಬಿ.ಪಿ. ಹರೀಶ್

"ಮುಂಜಾನೆಯ ಮೆರಗು"

ಹರಿಹರ ನ, 14– ಸರ್ಕಾರಿ ಕೆಲಸಗಳಿಗಾಗಿ ಸಾರ್ವಜನಿಕರು ತಾಲ್ಲೂಕು ಕೇಂದ್ರಗಳಿಗೆ ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ ಸರ್ಕಾರವೇ ಜನರ ಬಳಿಗೆ ಬಂದಿದ್ದು, ಗ್ರಾಮದಲ್ಲಿ ಆಯೋಜಿಸಿರುವ ಪ್ರಜಾಸೇವಾ ಆಂದೋಲನದ ಸದುಪಯೋಗವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು ಎಂದು ಶಾಸಕ ಬಿ.ಪಿ. ಹರೀಶ್ ಕರೆ ನೀಡಿದರು.

ಹರಿಹರ ತಾಲ್ಲೂಕಿನ ಹೊಳೆಸಿರಿಗೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ತಾಲ್ಲೂಕು ಆಡಳಿತ ಹಾಗೂ ವಿವಿಧ ಇಲಾಖೆಗಳ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ಕಾರದ ವಿವಿಧ ಸೌಲಭ್ಯಗಳು ಹಾಗೂ ಇಲಾಖೆಗಳ ಸೇವೆಗಳನ್ನು ಪಡೆಯಲು ಸಾರ್ವಜನಿಕರು ತಾಲ್ಲೂಕು ಕೇಂದ್ರಗಳಿಗೆ ತೆರಳಿ ಸಮಯ ಮತ್ತು ಹಣ ವ್ಯಯಿಸಬೇಕಾಗುತ್ತದೆ. ಇದನ್ನು ತಪ್ಪಿಸಿ ಜನರ ಸಮಸ್ಯೆಗಳಿಗೆ ಅವರ ಗ್ರಾಮಗಳಲ್ಲಿಯೇ ಪರಿಹಾರ ಒದಗಿಸುವ ಉದ್ದೇಶದಿಂದ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆ ಹಾಗೂ ಅಹವಾಲುಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಬೇಕು ಎಂದು ತಿಳಿಸಿದರು.

ಮಕ್ಕಳ ದಿನಾಚರಣೆಯ ಅಂಗವಾಗಿ ಮಕ್ಕಳಿಗೆ ಶುಭಾಶಯ ಕೋರಿದ ಶಾಸಕರು, ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಶಿಕ್ಷಣ ಮತ್ತು ಉತ್ತಮ ಅವಕಾಶಗಳನ್ನು ಕಲ್ಪಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.



ಕಾರ್ಯಕ್ರಮದಲ್ಲಿ ಹರಿಹರ ತಹಶೀಲ್ದಾರ್ ಸಂತೋಷ್ ಕುಮಾರ್ ಜಿ., ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುಮಲತಾ, ಕೃಷಿ ಅಧಿಕಾರಿ ನಟರಾಜ್, ತಾಲ್ಲೂಕು ಆರೋಗ್ಯಾಧಿಕಾರಿ ಅಲ್ತಾಲ್ ಖಾದರ್, ವೃತ್ತ ನಿರೀಕ್ಷಕ ಸುರೇಶ್ ಸಗರಿ, ಮಾಜಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಹಾಲೇಶಪ್ಪ ಬಿ., ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

1,400ಕ್ಕೂ ಹೆಚ್ಚು ಸಿಬ್ಬಂದಿಯ ಪರಿಶ್ರಮದಿಂದ ಉತ್ತಮ ಸೇವೆ: ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ

"ಮುಂಜಾನೆಯ ಮೆರಗು"

ದಾವಣಗೆರೆ ನ, 14– ನಗರದ ಅಭಿವೃದ್ಧಿ ಹಾಗೂ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವಲ್ಲಿ ದಾವಣಗೆರೆ ಮಹಾನಗರ ಪಾಲಿಕೆಯ ಪ್ರತಿಯೊಬ್ಬ ನೌಕರರ ಕೊಡುಗೆಯೂ ಅಮೂಲ್ಯವಾಗಿದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಹೇಳಿದರು.



ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ನೌಕರರು ಸೇರಿದಂತೆ ಸುಮಾರು 1,400 ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ನಗರದ ಸ್ವಚ್ಛತೆ, ನಿರ್ವಹಣೆ, ಅಭಿವೃದ್ಧಿ ಕಾರ್ಯಗಳು ಹಾಗೂ ಸಾರ್ವಜನಿಕ ಸೇವೆಗಳನ್ನು ಸಮರ್ಪಕವಾಗಿ ನಿರ್ವಹಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು. 'ಶಿಸ್ತು, ಸಂಘಟನೆ ಮತ್ತು ಹೋರಾಟ' ಎಂಬ ಧ್ಯೇಯದೊಂದಿಗೆ ಸಂಘಟಿತರಾಗಿರುವ ನೌಕರರ ಬದ್ಧತೆ ಮತ್ತು ಸೇವಾ ಮನೋಭಾವ ಶ್ಲಾಘನೀಯವಾಗಿದೆ. ಶಿಸ್ತುಬದ್ಧ ಜೀವನ, ಉತ್ತಮ ಆರೋಗ್ಯ ಹಾಗೂ ಮಾನಸಿಕ ನೆಮ್ಮದಿ ಪ್ರತಿಯೊಬ್ಬರ ವೈಯಕ್ತಿಕ ಮತ್ತು ವೃತ್ತಿಜೀವನದ ಯಶಸ್ಸಿಗೆ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟರು.

ನಿತ್ಯದ ಕರ್ತವ್ಯಗಳ ಜೊತೆಗೆ ಸರ್ಕಾರದ ವಿವಿಧ ಸಮೀಕ್ಷೆಗಳು, ನಿಗದಿತ ಅವಧಿಯ ಗುರಿಗಳು ಹಾಗೂ ಹೆಚ್ಚುವರಿ ಜವಾಬ್ದಾರಿಗಳನ್ನು ಹಲವು ಒತ್ತಡಗಳ ನಡುವೆಯೂ ಸಮರ್ಥವಾಗಿ ನಿರ್ವಹಿಸುತ್ತಿರುವ ನೌಕರರ ಪರಿಶ್ರಮ ಅಭಿನಂದನಾರ್ಹವಾಗಿದೆ ಎಂದರು.

ಸರ್ಕಾರದ ಜನಪರ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳ್ಳಲು ಹಾಗೂ ಸಾರ್ವಜನಿಕರಿಗೆ ಉತ್ತಮ ಆಡಳಿತ ಮತ್ತು ಸೇವೆ ದೊರೆಯಲು ಸರ್ಕಾರಿ ನೌಕರರ ಶ್ರಮವೇ ಪ್ರಮುಖ ಆಧಾರವಾಗಿದೆ. ಆದ್ದರಿಂದ ನೌಕರರ ಸೇವೆ ಮತ್ತು ಕೊಡುಗೆಯನ್ನು ಗುರುತಿಸಿ ಗೌರವಿಸುವುದು ಅಗತ್ಯ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ತಿಳಿಸಿದರು.

ರಾಜ್ಯಮಟ್ಟದ ಪವರ್‌ಲಿಫ್ಟಿಂಗ್ ಮತ್ತು ದೇಹದಾರ್ಢ್ಯ ಸ್ಪರ್ಧೆಗೆ ಶಾಸಕ ಸಮರ್ಥ್ ಶಾಮನೂರು ಚಾಲನೆ

"ಮುಂಜಾನೆಯ ಮೆರಗು"

ದಾವಣಗೆರೆ ನ, 14– ಯುವಜನರಲ್ಲಿ ಆತ್ಮವಿಶ್ವಾಸ, ಶಿಸ್ತು, ದೈಹಿಕ ಸಾಮರ್ಥ್ಯ ಹಾಗೂ ಕ್ರೀಡಾಸ್ಫೂರ್ತಿಯನ್ನು ಬೆಳೆಸುವಲ್ಲಿ ರಾಜ್ಯಮಟ್ಟದ ಕ್ರೀಡಾಕೂಟಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಶಾಸಕ ಸಮರ್ಥ್ ಶಾಮನೂರು ಹೇಳಿದರು.

ನಗರದ ಡಿ.ಸಿ.ಎಂ. ಟೌನ್‌ಶಿಪ್‌ನ ಮಹಾನಗರ ಪಾಲಿಕೆ ಒಳಾಂಗಣ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯ ಪಾನ್ ಇಂಡಿಯಾ ಮಾಸ್ಟರ್ ಪವರ್‌ಲಿಫ್ಟಿಂಗ್, ವೇಟ್‌ಲಿಫ್ಟಿಂಗ್ ಮತ್ತು ದೇಹದಾರ್ಢ್ಯ ಸಂಸ್ಥೆ ಹಾಗೂ ಶ್ರೀ ಸಾಯಿ ಹೈಟೆಕ್ ಜಿಮ್ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಪವರ್‌ಲಿಫ್ಟಿಂಗ್ ಮತ್ತು ದೇಹದಾರ್ಢ್ಯ ಸ್ಪರ್ಧಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಕ್ರೀಡಾಪಟುಗಳಿಗೆ ಶುಭ ಹಾರೈಸಿದರು.



ಇಂತಹ ರಾಜ್ಯಮಟ್ಟದ ಕ್ರೀಡಾಕೂಟಗಳು ಉದಯೋನ್ಮುಖ ಕ್ರೀಡಾಪಟುಗಳಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸಲು ಉತ್ತಮ ಅವಕಾಶ ಕಲ್ಪಿಸುತ್ತವೆ. ಸ್ಪರ್ಧೆಗಳಲ್ಲಿ ಭಾಗವಹಿಸುವುದರಿಂದ ಕ್ರೀಡಾಪಟುಗಳಲ್ಲಿ ಆತ್ಮವಿಶ್ವಾಸ, ಪರಿಶ್ರಮ, ಶಿಸ್ತು ಮತ್ತು ಸಾಧಿಸುವ ಛಲ ಹೆಚ್ಚುತ್ತದೆ. ಯುವಜನರು ಕ್ರೀಡೆಯನ್ನು ಜೀವನದ ಅವಿಭಾಜ್ಯ ಅಂಗವಾಗಿಸಿಕೊಂಡು ಉತ್ತಮ ಆರೋಗ್ಯದೊಂದಿಗೆ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು ಎಂದು ಆಶಿಸಿದರು.

ಈ ಸಂದರ್ಭದಲ್ಲಿ ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ಕ್ರೀಡಾಕೂಟದ ಆಯೋಜಕರು, ಕರ್ನಾಟಕ ರಾಜ್ಯ ಪಾನ್ ಇಂಡಿಯಾ ಮಾಸ್ಟರ್ ಪವರ್‌ಲಿಫ್ಟಿಂಗ್, ವೇಟ್‌ಲಿಫ್ಟಿಂಗ್ ಮತ್ತು ದೇಹದಾರ್ಢ್ಯ ಸಂಸ್ಥೆಯ ಪದಾಧಿಕಾರಿಗಳು, ಕ್ರೀಡಾಪಟುಗಳು, ತರಬೇತುದಾರರು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಎಚ್ಚರ ವಹಿಸಿ: ಶಾಸಕ ಶಾಂತನಗೌಡ ಸೂಚನೆ

"ಮುಂಜಾನೆಯ ಮೆರಗು"

ನ್ಯಾಮತಿ ನ, 14– ಪಟ್ಟಣದ ಜನತೆಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗದಂತೆ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಶಾಸಕ ಶಾಂತನಗೌಡ ಸೂಚನೆ ನೀಡಿದರು.



ನ್ಯಾಮತಿ ಪಟ್ಟಣಕ್ಕೆ ತುಂಗಭದ್ರಾ ನದಿಯಿಂದ ಕುಡಿಯುವ ನೀರು ಪೂರೈಕೆ ಮಾಡುವ ಗೋವಿನಕೋವಿ ಗ್ರಾಮದ ಜಾಕ್‌ವೆಲ್‌ಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ನೀರು ಪೂರೈಕೆ ವ್ಯವಸ್ಥೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಶಾಸಕರು, ಪಟ್ಟಣದ ಜನರಿಗೆ ನಿರಂತರವಾಗಿ ಕುಡಿಯುವ ನೀರು ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ನೀರು ಪೂರೈಕೆಯಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ತಾಂತ್ರಿಕ ಸಮಸ್ಯೆಗಳು ಎದುರಾದಲ್ಲಿ ತಕ್ಷಣವೇ ಪರಿಹಾರ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಾಜ್ಯಮಟ್ಟದ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ಗೆ ಸಚಿವ ಕೆ.ಎಸ್. ಬಸವಂತಪ್ಪ ಚಾಲನೆ

ಕ್ರೀಡೆಯಿಂದ ಮಕ್ಕಳಲ್ಲಿ ಶಿಸ್ತು, ಆತ್ಮವಿಶ್ವಾಸ ಮತ್ತು ಏಕಾಗ್ರತೆ ವೃದ್ಧಿ

"ಮುಂಜಾನೆಯ ಮೆರಗು"

ದಾವಣಗೆರೆ ನ, 14– ಕ್ರೀಡೆಗಳು ಮಕ್ಕಳಲ್ಲಿ ಶಿಸ್ತು, ಆತ್ಮವಿಶ್ವಾಸ, ಏಕಾಗ್ರತೆ ಹಾಗೂ ಗೆಲ್ಲುವ ಛಲವನ್ನು ಬೆಳೆಸುತ್ತವೆ. ಬಾಲ್ಯದಲ್ಲಿಯೇ ಕ್ರೀಡಾಸಕ್ತಿಯನ್ನು ಬೆಳೆಸಿಕೊಂಡು ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಯುವ ಪ್ರತಿಭೆಗಳಿಗೆ ಸೂಕ್ತ ಪ್ರೋತ್ಸಾಹ ಮತ್ತು ಅವಕಾಶ ಕಲ್ಪಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಸಚಿವ ಕೆ.ಎಸ್. ಬಸವಂತಪ್ಪ ಹೇಳಿದರು.

ನಗರದಲ್ಲಿ ದಾವಣಗೆರೆ ಬ್ಯಾಡ್ಮಿಂಟನ್ ಸಂಸ್ಥೆ ಹಾಗೂ ಕರ್ನಾಟಕ ಬ್ಯಾಡ್ಮಿಂಟನ್ ಸಂಸ್ಥೆ, ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿದ್ದ ಯೋನೆಕ್ಸ್ ಸನ್‌ರೈಸ್ ಕರ್ನಾಟಕ ರಾಜ್ಯಮಟ್ಟದ 11 ವರ್ಷದೊಳಗಿನ ಹಾಗೂ 13 ವರ್ಷದೊಳಗಿನ ಬಾಲಕ–ಬಾಲಕಿಯರ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯು ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಪೂರಕವಾಗಿದ್ದು, ಜೀವನದಲ್ಲಿ ಶಿಸ್ತು, ತಾಳ್ಮೆ ಹಾಗೂ ಪರಿಶ್ರಮದ ಗುಣಗಳನ್ನು ಕಲಿಸುತ್ತದೆ. ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಲು ಪ್ರತಿಭೆಯ ಜೊತೆಗೆ ನಿರಂತರ ಅಭ್ಯಾಸ, ಆತ್ಮವಿಶ್ವಾಸ ಮತ್ತು ದೃಢಸಂಕಲ್ಪ ಅಗತ್ಯ. ಯುವ ಕ್ರೀಡಾಪಟುಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಸಾಧನೆ ಮಾಡಬೇಕು ಎಂದು ಶುಭ ಹಾರೈಸಿದರು.



ರಾಜ್ಯಮಟ್ಟದ ಈ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಿರುವ ಎಲ್ಲ ಕ್ರೀಡಾಪಟುಗಳು ಕ್ರೀಡಾ ಮನೋಭಾವದಿಂದ ಸ್ಪರ್ಧಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಬ್ಯಾಡ್ಮಿಂಟನ್ ಸಂಸ್ಥೆಯ ಅಧ್ಯಕ್ಷ ಕುಮಾರ ಬಂಗಾರಪ್ಪ, ದಾವಣಗೆರೆ ಶಾಸಕ ಸಮರ್ಥ್ ಶಾಮನೂರು ಸೇರಿದಂತೆ ಹಲವು ಗಣ್ಯರು, ಕ್ರೀಡಾ ಸಂಘಟಕರು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

ಕೆಪಿಸಿಸಿ ಕಚೇರಿಯಲ್ಲಿ ಪಕ್ಷ ಸಂಘಟನೆ ಬಲಪಡಿಸುವ ಕುರಿತು ಸಮಾಲೋಚನೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 14– ಕೆಪಿಸಿಸಿ ಕಚೇರಿಗೆ ಭೇಟಿ ನೀಡಿದ ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರಾದ ವೀರಪ್ಪ ಮೊಯ್ಲಿ ಅವರೊಂದಿಗೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಪಕ್ಷ ಸಂಘಟನೆ ಹಾಗೂ ಸಂಘಟನಾತ್ಮಕ ಚಟುವಟಿಕೆಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಸಮಾಲೋಚನೆ ನಡೆಸಿದರು.



ಈ ಸಂದರ್ಭದಲ್ಲಿ ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವುದು, ಕಾರ್ಯಕರ್ತರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವುದು ಹಾಗೂ ಪಕ್ಷದ ವಿವಿಧ ಸಂಘಟನಾತ್ಮಕ ಚಟುವಟಿಕೆಗಳಿಗೆ ವೇಗ ನೀಡುವ ಕುರಿತು ಚರ್ಚೆ ನಡೆಸಲಾಯಿತು.

ಸಭೆಯಲ್ಲಿ ಹಿರಿಯ ಸಚಿವ ಈಶ್ವರ ಖಂಡ್ರೆ ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಅಧ್ಯಕ್ಷ ಹೆಚ್. ಎಂ.ರೇವಣ್ಣ ಅವರು ಉಪಸ್ಥಿತರಿದ್ದರು.

ಯುವ ಸಮೂಹಕ್ಕೆ ಪ್ರಜಾಪ್ರಭುತ್ವದ ಮೌಲ್ಯಗಳ ಕುರಿತು ಅರಿವು ಅಗತ್ಯ :ಶಾಸಕ ಸಮರ್ಥ್ ಶಾಮನೂರು

"ಮುಂಜಾನೆಯ ಮೆರಗು"

ದಾವಣಗೆರೆ, ನ.14– ದೇಶದ ಭವಿಷ್ಯವಾಗಿರುವ ಯುವಜನತೆ ಸಂವಿಧಾನದ ಆಶಯಗಳು, ಮತದಾನದ ಹಕ್ಕು ಹಾಗೂ ಪ್ರಜಾಪ್ರಭುತ್ವದ ಮೂಲಭೂತ ತತ್ವಗಳನ್ನು ಅರಿತುಕೊಂಡು ಸಕ್ರಿಯವಾಗಿ ತೊಡಗಿಸಿಕೊಳ್ಳುವುದು ಆರೋಗ್ಯಕರ ಸಮಾಜದ ನಿರ್ಮಾಣಕ್ಕೆ ಅತ್ಯಗತ್ಯವಾಗಿದೆ ಎಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಸಮರ್ಥ್ ಶಾಮನೂರು ಅವರು ತಿಳಿಸಿದರು.

ಅವರು ಶನಿವಾರ ಜಿಲ್ಲಾಡಳಿತ , ಸಮಾಜ ಕಲ್ಯಾಣ ಇ

ವಿಜಯಪುರದ ಮಕ್ಕಳೊಂದಿಗೆ ಮಕ್ಕಳ ದಿನಾಚರಣೆ ಸಂಭ್ರಮ: ಸಚಿವ ಮಧು ಬಂಗಾರಪ್ಪ

ಮಕ್ಕಳ ಪ್ರತಿಭೆ ಅನಾವರಣಕ್ಕೆ ಗುಣಮಟ್ಟದ ಶಿಕ್ಷಣ ಮತ್ತು ಸೂಕ್ತ ಅವಕಾಶ ಅಗತ್ಯ: ಎಂ.ಬಿ. ಪಾಟೀಲ

“ಮುಂಜಾನೆಯ ಮೆರಗು”

ವಿಜಯಪುರ ನ, 14– ಮಕ್ಕಳೊಂದಿಗೆ ಬೆರೆತು ಮಕ್ಕಳ ದಿನಾಚರಣೆಯನ್ನು ಆಚರಿಸಿದ್ದು ಸಂತಸ ತಂದಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ಹೇಳಿದರು.

ನಗರದ ಗಾಂಧಿ ಚೌಕದಲ್ಲಿರುವ ಕರ್ನಾಟಕ ಸಾರ್ವಜನಿಕ ಶಾಲೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ ಜಿಲ್ಲಾ ಪಂಚಾಯಿತಿ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಕಾರ್ಯಕ್ರಮಕ್ಕೆ ಆಗಮಿಸಿದ ಸಚಿವರಿಗೆ ಪುಟಾಣಿ ಮಕ್ಕಳು ಹೂಮಳೆ ಸುರಿಸುವ ಮೂಲಕ ಆತ್ಮೀಯ ಸ್ವಾಗತ ಕೋರಿದರು. ಮಕ್ಕಳ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು ಅತಿಥಿಗಳ ಮನಸೂರೆಗೊಂಡವು. ಈ ಸಂದರ್ಭದಲ್ಲಿ ಸಚಿವರು ಮಕ್ಕಳಿಗೆ ಸಿಹಿ ತಿನಿಸಿ ಮಕ್ಕಳೊಂದಿಗೆ ಸಂಭ್ರಮ ಹಂಚಿಕೊಂಡರು.

ಬಳಿಕ ಮಾತನಾಡಿದ ಸಚಿವ ಮಧು ಬಂಗಾರಪ್ಪ, ಕಳೆದ ಮೂರು ವರ್ಷಗಳಲ್ಲಿ ಶಿಕ್ಷಣ ಇಲಾಖೆಯಲ್ಲಿ ಕೈಗೊಂಡಿರುವ ಬದಲಾವಣೆಗಳು ಹಾಗೂ ಪ್ರತಿಯೊಬ್ಬರಿಗೂ ಗುಣಮಟ್ಟದ ಶಿಕ್ಷಣ ಒದಗಿಸಲು ಸರ್ಕಾರ ಮಾಡುತ್ತಿರುವ ಪ್ರಯತ್ನಗಳ ಕುರಿತು ವಿವರಿಸಿದರು. ಕರ್ನಾಟಕ ಸಾರ್ವಜನಿಕ ಶಾಲೆಗಳ ಸ್ಥಾಪನೆಯ ಹಿಂದಿನ ಉದ್ದೇಶ ಮತ್ತು ಪರಿಕಲ್ಪನೆಯನ್ನು ತಿಳಿಸಿದರು. ರಾಜ್ಯದ ಮಕ್ಕಳು ಪ್ರತಿಭಾವಂತರಾಗಿದ್ದು, ಕಲಿಕೆಯಲ್ಲಿ ದೇಶಕ್ಕೇ ಮಾದರಿಯಾಗಿದ್ದಾರೆ ಎಂದು ಹೆಮ್ಮೆ ವ್ಯಕ್ತಪಡಿಸಿದರು.

ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ ಅವರ ಅಭಿವೃದ್ಧಿ ಕಾರ್ಯಗಳನ್ನು ಪ್ರಸ್ತಾಪಿಸಿದ ಅವರು, ಸಚಿವರು ತಮಗೂ ಮಾರ್ಗದರ್ಶಕರಾಗಿದ್ದಾರೆ ಎಂದು ಕೃತಜ್ಞತೆಯಿಂದ ಸ್ಮರಿಸಿದರು.

ಸಚಿವ ಎಂ.ಬಿ. ಪಾಟೀಲ ಮಾತನಾಡಿ, ಮಕ್ಕಳಿಗೆ ಸೂಕ್ತ ಅವಕಾಶಗಳು ದೊರೆತಾಗ ಅವರಲ್ಲಿರುವ ಜ್ಞಾನ, ಪ್ರತಿಭೆ ಮತ್ತು ಸಾಮರ್ಥ್ಯ ಅನಾವರಣಗೊಳ್ಳಲು ಸಾಧ್ಯ. ಇದರಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶಿಕ್ಷಕರು ಶಾಲೆಯ ಹೃದಯವಿದ್ದಂತೆ. ಉತ್ತಮ ಶಿಕ್ಷಕರಿಂದಲೇ ಶಾಲೆಗೆ ಶೋಭೆ ಬರುತ್ತದೆ ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ವಿಜಯಪುರದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರು ಮಾಜಿ ಮುಖ್ಯಮಂತ್ರಿ ದಿವಂಗತ ಎಸ್. ಬಂಗಾರಪ್ಪ ಅವರ ಭಾವಚಿತ್ರವಿರುವ ಸ್ಮರಣಿಕೆಯನ್ನು ಸಚಿವ ಮಧು ಬಂಗಾರಪ್ಪ ಅವರಿಗೆ ನೀಡಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಕೆ. ಆನಂದ್, ವಿಜಯಪುರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಂಗಾಧರ ಸಂಬಣ್ಣಿ, ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಚಂದ್ರಶೇಖರ ನುಗ್ಲಿ, ಅಬ್ದುಲ್ ಹಮೀದ್ ಮುಶ್ರೀಫ್, ಅನಿಸಾ ಮುಜಾವರ್ ಸೇರಿದಂತೆ ಹಲವು ಗಣ್ಯರು, ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ತತ್ವಗಳು ಸಮಸಮಾಜ ನಿರ್ಮಾಣಕ್ಕೆ ಸ್ಫೂರ್ತಿ: ಸಚಿವ ಕೆ.ಎಚ್. ಮುನಿಯಪ್ಪ

“ಮುಂಜಾನೆಯ ಮೆರಗು”

ದೇವನಹಳ್ಳಿ ನ, 14– ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ ಭಾರತರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ್ ರಾಂ ಅವರ ತತ್ವಾದರ್ಶಗಳು ಇಂದಿನ ಯುವಪೀಳಿಗೆಗೆ ಸದಾ ದಾರಿದೀಪವಾಗಿವೆ ಎಂದು ಸಚಿವ ಕೆ.ಎಚ್. ಮುನಿಯಪ್ಪ ಹೇಳಿದರು.



ದೇವನಹಳ್ಳಿ ತಾಲ್ಲೂಕಿನ ಕುಂದಾಣ ಹೋಬಳಿಯ ಜಾಲಿಗೆ ಗ್ರಾಮದಲ್ಲಿ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ್ ರಾಂ ಅವರ ನೂತನ ಪ್ರತಿಮೆಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಇಬ್ಬರೂ ಮಹಾನ್ ನಾಯಕರ ಪ್ರತಿಮೆಗಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು.

ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಿದ ಜಾಲಿಗೆ ಗ್ರಾಮದ ಮುಖಂಡರು, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರಿಗೆ ಸಚಿವರು ಕೃತಜ್ಞತೆ ಸಲ್ಲಿಸಿದರು. ಗ್ರಾಮದ ಸಾರ್ವಜನಿಕರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಗ್ರಾಮೀಣ ವಿದ್ಯಾರ್ಥಿಗಳಿಗೆ ತಕ್ಷಣ ಬಸ್ ಸೌಲಭ್ಯ ಕಲ್ಪಿಸಿ: ಅಧಿಕಾರಿಗಳಿಗೆ ಶ್ರೀರಾಮುಲು ಸೂಚನೆ

“ಮುಂಜಾನೆಯ ಮೆರಗು”

ಬಳ್ಳಾರಿ ನ, 14– ಬಳ್ಳಾರಿ ಗ್ರಾಮಾಂತರ ಕ್ಷೇತ್ರದ ಗ್ರಾಮೀಣ ಭಾಗದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಸಮರ್ಪಕ ಬಸ್ ಸೌಲಭ್ಯವಿಲ್ಲದೆ ತೊಂದರೆಯಾಗುತ್ತಿರುವ ವಿಷಯವನ್ನು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಮಾಜಿ ಸಚಿವ ಬಿ. ಶ್ರೀರಾಮುಲು ಅವರ ಗಮನಕ್ಕೆ ತಂದಿದ್ದಾರೆ.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಾಲಾ–ಕಾಲೇಜುಗಳಿಗೆ ತೆರಳಲು ಬಸ್ ವ್ಯವಸ್ಥೆ ಕಲ್ಪಿಸುವಂತೆ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ, ತಕ್ಷಣವೇ ಸಂಬಂಧಪಟ್ಟ ಸಾರಿಗೆ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಶ್ರೀರಾಮುಲು, ವಿದ್ಯಾರ್ಥಿಗಳಿಗೆ ಕೂಡಲೇ ಅಗತ್ಯ ಬಸ್ ಸೌಲಭ್ಯ ಒದಗಿಸುವಂತೆ ಆಗ್ರಹಿಸಿದ್ದಾರೆ.



ಬಳಿಕ ರಾಜ್ಯ ಸರ್ಕಾರದ ವಿರುದ್ಧ ಟೀಕಾಪ್ರಹಾರ ನಡೆಸಿದ ಅವರು, ಉಚಿತ ಬಸ್ ಸೌಲಭ್ಯ ಕಲ್ಪಿಸಿದ್ದೇವೆ ಎಂದು ಹೇಳಿಕೊಳ್ಳುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಅನುಭವಿಸುತ್ತಿರುವ ಸಮಸ್ಯೆಗಳನ್ನು ಗಮನಿಸಬೇಕು ಎಂದು ಒತ್ತಾಯಿಸಿದರು.


ಇದು ಕೇವಲ ಬಳ್ಳಾರಿ ಗ್ರಾಮಾಂತರ ಕ್ಷೇತ್ರಕ್ಕೆ ಸೀಮಿತವಾದ ಸಮಸ್ಯೆಯಲ್ಲ. ರಾಜ್ಯದ ಹಲವು ಗ್ರಾಮೀಣ ಪ್ರದೇಶಗಳಲ್ಲಿ ವಿದ್ಯಾರ್ಥಿಗಳಿಗೆ ಸೂಕ್ತ ಸಾರಿಗೆ ವ್ಯವಸ್ಥೆ ಇಲ್ಲದೆ ತೊಂದರೆಯಾಗುತ್ತಿದೆ. ಉಚಿತ ಬಸ್ ಸೌಲಭ್ಯದ ಬಗ್ಗೆ ಪ್ರಚಾರ ಮಾಡುವ ಸರ್ಕಾರ, ಗ್ರಾಮೀಣ ಭಾಗದ ವಿದ್ಯಾರ್ಥಿಗಳ ವಾಸ್ತವ ಸಮಸ್ಯೆಗಳನ್ನು ಅರಿತುಕೊಂಡು ಪರಿಹಾರ ಕಲ್ಪಿಸಬೇಕು. ಸರ್ಕಾರದ ಜಾಹೀರಾತುಗಳಿಗಿಂತ ಜನರ ಸಮಸ್ಯೆಗಳಿಗೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸಾರಿಗೆ ಸಮಸ್ಯೆ ಅಡ್ಡಿಯಾಗದಂತೆ ಸರ್ಕಾರ ಹಾಗೂ ಸಾರಿಗೆ ಇಲಾಖೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಬಿ. ಶ್ರೀರಾಮುಲು ಒತ್ತಾಯಿಸಿದ್ದಾರೆ.

ನೆಹರೂ ಅವರ ಸೇವೆ, ಸಾಧನೆ ಸ್ಮರಿಸಿದ ಮಾಜಿ ಸಿಎಂ ಸಿದ್ದರಾಮಯ್ಯ

“ಮುಂಜಾನೆಯ ಮೆರಗು”

ಬೆಂಗಳೂರು ನ, 14– ಭಾರತದ ಮೊದಲ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರೂ ಅವರ ಜನ್ಮದಿನದ ಅಂಗವಾಗಿ ಬೆಂಗಳೂರಿನ ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಭವನದಲ್ಲಿ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾಲ್ಗೊಂಡು, ನೆಹರೂ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಶಕ್ತ ಭಾರತ ನಿರ್ಮಾಣಕ್ಕೆ ಪಂಡಿತ್ ಜವಾಹರಲಾಲ್ ನೆಹರೂ ಅವರು ನೀಡಿದ ಕೊಡುಗೆ, ಸೇವೆ ಹಾಗೂ ಸಾಧನೆಗಳನ್ನು ಸ್ಮರಿಸಿದರು. ದೇಶದ ಅಭಿವೃದ್ಧಿ, ಪ್ರಗತಿ ಹಾಗೂ ಭವಿಷ್ಯದ ಪೀಳಿಗೆಯ ಕಲ್ಯಾಣಕ್ಕಾಗಿ ನೆಹರೂ ಅವರು ಕೈಗೊಂಡ ಕಾರ್ಯಗಳು ಸ್ಮರಣೀಯವಾಗಿವೆ ಎಂದು ತಿಳಿಸಿದರು.

ನೆಹರೂ ಅವರ ಜನ್ಮದಿನವನ್ನು ಮಕ್ಕಳ ದಿನಾಚರಣೆಯಾಗಿ ಆಚರಿಸುವ ಮೂಲಕ ಮಕ್ಕಳ ಮೇಲಿನ ಅವರ ಪ್ರೀತಿ, ಕಾಳಜಿ ಹಾಗೂ ಮಕ್ಕಳ ಉಜ್ವಲ ಭವಿಷ್ಯದ ಕನಸನ್ನು ಸ್ಮರಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ, ಸಚಿವ ಈಶ್ವರ್ ಖಂಡ್ರೆ, ಎಐಸಿಸಿ ಕಾರ್ಯದರ್ಶಿ ಗೋಪಿನಾಥನ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ.ರೇವಣ್ಣ ಸೇರಿದಂತೆ ಪಕ್ಷದ ಮುಖಂಡರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ರಾಜ್ಯದ ಸಾಲದ ಹೊರೆ ಎಷ್ಟಿದೆ? ಮಾಹಿತಿ ಕೋರಿ ರಾಜ್ಯಪಾಲರಿಗೆ ಪತ್ರ; ಸಾಲ ಮರುಪಾವತಿಗೆ 50 ಸಾವಿರ ಚೆಕ್ ಸಲ್ಲಿಕೆ


“ಮುಂಜಾನೆಯ ಮೆರಗು”

ಬೆಂಗಳೂರು ನ, 14– ಕರ್ನಾಟಕ ಸರ್ಕಾರ ಮಾಡಿರುವ ಒಟ್ಟು ಸಾಲದ ಪ್ರಮಾಣ ಹಾಗೂ ರಾಜ್ಯದ ಪ್ರತಿಯೊಬ್ಬ ನಾಗರಿಕನ ಮೇಲಿರುವ ತಲಾ ಸಾಲದ ವಿವರಗಳನ್ನು ಬಹಿರಂಗಪಡಿಸುವಂತೆ ಕೋರಿ ವ್ಯಕ್ತಿಯೊಬ್ಬರು ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ.

ರಾಜ್ಯ ಸರ್ಕಾರ ವಿವಿಧ ಯೋಜನೆಗಳಿಗಾಗಿ ಮಾಡಿರುವ ಸಾಲದ ಪ್ರಮಾಣ, ರಾಜ್ಯದ ಒಟ್ಟು ಸಾಲದ ಹೊರೆ ಹಾಗೂ ಜನಸಂಖ್ಯೆಗೆ ಅನುಗುಣವಾಗಿ ಪ್ರತಿಯೊಬ್ಬ ನಾಗರಿಕನ ಪಾಲಿಗೆ ಬರುವ ಸಾಲದ ಮೊತ್ತದ ಬಗ್ಗೆ ಅಧಿಕೃತ ಮಾಹಿತಿ ನೀಡುವಂತೆ ಪತ್ರದಲ್ಲಿ ಮನವಿ ಮಾಡಿದ್ದಾರೆ.

ಈ ಸಂಬಂಧ ಕಳೆದ ಏಪ್ರಿಲ್ 10ರಂದು ಸಲ್ಲಿಸಿದ್ದ ಮನವಿಗೆ ಈವರೆಗೂ ಸೂಕ್ತ ಮಾಹಿತಿ ದೊರೆತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಆರು ತಿಂಗಳು ಕಳೆದರೂ ಮಾಹಿತಿ ನೀಡದಿರುವ ಹಿನ್ನೆಲೆಯಲ್ಲಿ ಮತ್ತೊಮ್ಮೆ ರಾಜ್ಯಪಾಲರಿಗೆ ಪತ್ರ ಬರೆದಿದ್ದಾರೆ.

ಇದೇ ಸಂದರ್ಭದಲ್ಲಿ 2026ರ ಅಕ್ಟೋಬರ್ ತಿಂಗಳ ತಮ್ಮ ಆದಾಯದಿಂದ 50 ಸಾವಿರ ರೂ. ಮೊತ್ತದ ಚೆಕ್ ಅನ್ನು ಲಗತ್ತಿಸಿ, ಅದನ್ನು ರಾಜ್ಯ ಸರ್ಕಾರದ ಸಾಲದ ಖಾತೆಗೆ ಜಮಾ ಮಾಡಿಕೊಳ್ಳುವಂತೆ ಮನವಿ ಮಾಡಿದ್ದಾರೆ.



ರಾಜ್ಯದ ಒಟ್ಟು ಸಾಲದಲ್ಲಿ ತಮ್ಮ ಪಾಲಿಗೆ ಬರುವ ಮೊತ್ತವನ್ನು ತಿಳಿಸಿದರೆ, ಅದನ್ನು ಪಾವತಿಸುವ ಮೂಲಕ ರಾಜ್ಯದ ಸಾಲದ ಹೊರೆ ಕಡಿಮೆ ಮಾಡಲು ಸಹಕರಿಸುವುದಾಗಿ ತಿಳಿಸಿದ್ದಾರೆ. ರಾಜ್ಯದ ಸಾಲದ ಪ್ರಮಾಣ ಮತ್ತು ಪ್ರತಿಯೊಬ್ಬ ನಾಗರಿಕನ ಮೇಲಿರುವ ಸಾಲದ ಹೊಣೆಗಾರಿಕೆಯ ಕುರಿತು ಸ್ಪಷ್ಟ ಮಾಹಿತಿ ನೀಡುವಂತೆ ಅವರು ರಾಜ್ಯಪಾಲರನ್ನು ಕೋರಿದ್ದಾರೆ. ಈ ಪತ್ರ ಸಾರ್ವಜನಿಕ ವಲಯದಲ್ಲಿ ಗಮನ ಸೆಳೆದಿದೆ.

ನೆಹರೂ ಜನ್ಮದಿನ, ಮಕ್ಕಳ ದಿನಾಚರಣೆ: ಮಕ್ಕಳಿಗೆ ಶುಭಾಶಯ ಕೋರಿದ ಸಿಎಂ ಡಿ.ಕೆ.ಶಿವಕುಮಾರ್

“ಮುಂಜಾನೆಯ ಮೆರಗು”


ಬೆಂಗಳೂರು ನ, 14– ಕೆಪಿಸಿಸಿ ಕಚೇರಿಯ ಭಾರತ್ ಜೋಡೋ ಸಭಾಂಗಣದಲ್ಲಿ ಭಾರತದ ಮೊದಲ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರೂ ಅವರ ಜನ್ಮದಿನ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪಾಲ್ಗೊಂಡು, ಪಂಡಿತ್ ಜವಾಹರಲಾಲ್ ನೆಹರೂ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು. ಇದೇ ವೇಳೆ ನೆಹರೂ ಅವರ ವೇಷಭೂಷಣ ಧರಿಸಿದ್ದ ಬಾಲಕನೊಂದಿಗೆ ಆತ್ಮೀಯವಾಗಿ ಮಾತನಾಡಿ, ಮಕ್ಕಳೊಂದಿಗೆ ಸಂತಸ ಹಂಚಿಕೊಂಡರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಕ್ಕಳಿಗೆ ಮಕ್ಕಳ ದಿನಾಚರಣೆಯ ಶುಭಾಶಯಗಳನ್ನು ತಿಳಿಸಿದರು.

ಮಕ್ಕಳ ಮೇಲಿನ ಅಪಾರ ಪ್ರೀತಿ ಮತ್ತು ಕಾಳಜಿಯಿಂದಾಗಿ ಪಂಡಿತ್ ಜವಾಹರಲಾಲ್ ನೆಹರೂ ಅವರ ಜನ್ಮದಿನವನ್ನು ದೇಶಾದ್ಯಂತ ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಕೆಪಿಸಿಸಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಭಾಗವಹಿಸಿ ನೆಹರೂ ಅವರ ಸ್ಮರಣೆಗೆ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ, ಸಚಿವ ಈಶ್ವರ್ ಖಂಡ್ರೆ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ, ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್, ಕೆಪಿಸಿಸಿ ಉಪಾಧ್ಯಕ್ಷ ನಾರಾಯಣಸ್ವಾಮಿ ಸೇರಿದಂತೆ ಪಕ್ಷದ ಹಿರಿಯ ನಾಯಕರು ಉಪಸ್ಥಿತರಿದ್ದರು.



ದೀಪಾವಳಿ ಬಂಜಾರ ಜನಾಂಗದ ಅತ್ಯುನ್ನತ ಸಾಂಸ್ಕೃತಿಕ ಹಬ್ಬ: ಗೋಪಾಲ ಬಿ. ನಾಯಕ್

ಕಿಲಾರಹಟ್ಟಿ ತಾಂಡಾದಲ್ಲಿ ಸಂಭ್ರಮದಿಂದ ದೀಪಾವಳಿ ಆಚರಣೆ

“ಮುಂಜಾನೆಯ ಮೆರಗು”

ಕುಷ್ಟಗಿ ನ, 14– ಬಂಜಾರ ಜನಾಂಗದ ಸಾಂಸ್ಕೃತಿಕ ಪರಂಪರೆ, ಸಂಪ್ರದಾಯ ಹಾಗೂ ಜೀವನಶೈಲಿಯನ್ನು ಪ್ರತಿಬಿಂಬಿಸುವ ದೀಪಾವಳಿ ಹಬ್ಬವು ಜನಾಂಗದ ಅತ್ಯುನ್ನತ ಸಾಂಸ್ಕೃತಿಕ ಹಬ್ಬವಾಗಿದೆ ಎಂದು ವಾರ್ಯ್ ಆಫ್ ಬಂಜಾರ ನಿರೂಪಕ, ಗಾಯಕ ಹಾಗೂ ಸಾಹಿತಿ ಗೋಪಾಲ ಬಿ. ನಾಯಕ್ ಹೇಳಿದರು.

ತಾಲೂಕಿನ ಕಿಲಾರಹಟ್ಟಿ ತಾಂಡಾದಲ್ಲಿ ಬಂಜಾರ ಸಮುದಾಯದ ವತಿಯಿಂದ ಮೂರು ದಿನಗಳ ಕಾಲ ದೀಪಾವಳಿ ಹಬ್ಬವನ್ನು ಸಾಂಪ್ರದಾಯಿಕವಾಗಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಬಂಜಾರ ಸಮುದಾಯದ ಪ್ರತಿ ತಾಂಡಾದಲ್ಲಿಯೂ ಈ ಹಬ್ಬವನ್ನು ವಿಶೇಷ ಆಚರಣೆಗಳೊಂದಿಗೆ ಮೂರು ದಿನಗಳ ಕಾಲ ಆಚರಿಸುವುದು ವಾಡಿಕೆಯಾಗಿದೆ.



ದೀಪಾವಳಿ ಅಮಾವಾಸ್ಯೆಯ ರಾತ್ರಿ ಮದುವೆಯಾಗದ ಕನ್ಯೆಯರು ಕೈಯಲ್ಲಿ ದೀಪದ ಪ್ರಣತಿಗಳನ್ನು ಹಿಡಿದು ಮನೆಮನೆಗೆ ತೆರಳಿ ತಾಂಡಾದ ಹಿರಿಯರು, ಕಿರಿಯರು ಸೇರಿದಂತೆ ಎಲ್ಲರ ಒಳಿತಿಗಾಗಿ ಪ್ರಾರ್ಥಿಸುವುದು ಈ ಹಬ್ಬದ ವಿಶೇಷ ಸಂಪ್ರದಾಯವಾಗಿದೆ.

ಮರುದಿನ ಬೆಳಿಗ್ಗೆ ಬಂಜಾರ ಜನಾಂಗದ ಸಾಂಪ್ರದಾಯಿಕ ಉಡುಗೆ–ತೊಡುಗೆಗಳನ್ನು ಧರಿಸಿ ಹೊಲಗಳಿಗೆ ತೆರಳುವ ಮಹಿಳೆಯರು, ಅಲ್ಲಿ ಬೆಳೆದ ವಿವಿಧ ಬಗೆ–ಯ ಹೂವುಗಳನ್ನು ಸಂಗ್ರಹಿಸಿ ತಂದು ಮನೆಗಳ ಮುಂದೆ ಹಸುವಿನ ಸಗಣಿಯಿಂದ ಅಲಂಕರಿಸಿ ಹಬ್ಬದ ಸಂಭ್ರಮವನ್ನು ಹೆಚ್ಚಿಸುತ್ತಾರೆ. ಈ ಆಚರಣೆ ಬಂಜಾರ ಜನಾಂಗದ ಪ್ರಕೃತಿ ಆರಾಧನೆ ಹಾಗೂ ಸಾಂಸ್ಕೃತಿಕ ಪರಂಪರೆಯ ಪ್ರತೀಕವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಗೋಪಾಲ ಬಿ. ನಾಯಕ್, ಬಂಜಾರ ಸಮುದಾಯದ ವಿಶಿಷ್ಟ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕೆಲಸವಾಗಬೇಕು. ನಮ್ಮ ಸಂಸ್ಕೃತಿಯ ಜೊತೆಗೆ ಬಂಜಾರ ಭಾಷೆ ಹಾ

ಪ್ರಜಾಸೇವಾ ಆಂದೋಲನದಲ್ಲಿ ಸಮಸ್ಯೆಗಳ ಸುರಿಮಳೆ ಅಧಿಕಾರಿಗಳ ಗೈರಿಗೆ ರೈತ ಸಂಘದ ಪದಾಧಿಕಾರಿಗಳ ಆಕ್ರೋಶ

“ಮುಂಜಾನೆಯ ಮೆರಗು”

ಜಗಳೂರು: ನ.14– ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸಿ ಪರಿಹಾರ ಕಲ್ಪಿಸುವ ಉದ್ದೇಶದಿಂದ ತಾಲೂಕು ಆಡಳಿತದ ವತಿಯಿಂದ ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪ್ರಜಾಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ರೈತ ಮುಖಂಡರು ವಿವಿಧ ಇಲಾಖೆಗಳ ವಿರುದ್ಧ ಸಮಸ್ಯೆಗಳ ಸರಮಾಲೆಯನ್ನೇ ತೆರೆದಿಟ್ಟರು.

ಕಾರ್ಯಕ್ರಮ ಆರಂಭವಾಗುತ್ತಿದ್ದಂತೆ ರೈತ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ತಮ್ಮ ಗ್ರಾಮಗಳಲ್ಲಿನ ಕುಡಿಯುವ ನೀರು, ಆರೋಗ್ಯ, ರಸ್ತೆ, ಮೂಲಸೌಕರ್ಯ, ಸರ್ಕಾರಿ ಜಮೀನು, ಮದ್ಯ ಮಾರಾಟ ಸೇರಿದಂತೆ ಹಲವು ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು. ಹಲವು ವರ್ಷಗಳಿಂದ ಅರ್ಜಿ ಸಲ್ಲಿಸಿದರೂ ಸಮಸ್ಯೆಗಳಿಗೆ ಪರಿಹಾರ ಸಿಗದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಜನೌಷಧಿ ಕೇಂದ್ರ ಸ್ಥಳಾಂತರಕ್ಕೆ ಆಕ್ಷೇಪ

ಪಟ್ಟಣದ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿದ್ದ ಜನೌಷಧಿ ಕೇಂದ್ರವನ್ನು ಆಸ್ಪತ್ರೆಯ ಹೊರಭಾಗಕ್ಕೆ ಸ್ಥಳಾಂತರಿಸಿರುವುದರಿಂದ ರೋಗಿಗಳಿಗೆ ತೊಂದರೆಯಾಗುತ್ತಿದೆ. ಅಲ್ಲದೆ,



ಆಸ್ಪತ್ರೆಯಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಶೌಚಾಲಯ ನಿರ್ಮಿಸಿಕೊಡುವಂತೆ 2021ರಲ್ಲಿಯೇ ಅರ್ಜಿ ಸಲ್ಲಿಸಿದ್ದು, 2025ರಲ್ಲೂ ಮತ್ತೊಮ್ಮೆ ಮನವಿ ನೀಡಲಾಗಿದೆ. ಆದರೆ ಈವರೆಗೆ ಯಾವ ಕ್ರಮ ಕೈಗೊಂಡಿದ್ದೀರಿ ಎಂದು ರೈತ ಸಂಘದ ಪ್ರಧಾನ ಕಾರ್ಯದರ್ಶಿ ಮಹಾಂತೇಶ್ ಪ್ರಶ್ನಿಸಿದರು.

ಟ್ಯಾಂಕರ್ ನೀರು ಬಳಕೆಯಿಂದ ಚರ್ಮದ ಸಮಸ್ಯೆ ಆರೋಪ

ಮರೇನಹಳ್ಳಿ ಗ್ರಾಮದ ಓಬಳೇಶ್ ಮಾತನಾಡಿ, ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗಿದ್ದು, ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ. ಆದರೆ ಈ ನೀರನ್ನು ಬಳಸಿದ ಬಳಿಕ ಕೆಲವರಿಗೆ ಮೈಮೇಲೆ ಗುಳ್ಳೆಗಳು ಕಾಣಿಸಿಕೊಂಡು ತುರಿಕೆ ಹಾಗೂ ಅಲರ್ಜಿ ಸಮಸ್ಯೆಗಳು ಉಂಟಾಗುತ್ತಿವೆ. ಕೆಲವರು ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಇದಕ್ಕೆ ಪ್ರತಿಕ್ರಿಯಿಸಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರು, ಟ್ಯಾಂಕರ್ ಮೂಲಕ ಪೂರೈಸುತ್ತಿರುವ ನೀರಿನ ಗುಣಮಟ್ಟವನ್ನು ಪರೀಕ್ಷಿಸುವಂತೆ ತಾಲೂಕು ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕಲು ಆಗ್ರಹ

ತಾಲೂಕಿನಾದ್ಯಂತ ಗೂಡಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ನಡೆಯುತ್ತಿದ್ದರೂ ಅಬಕಾರಿ ಇಲಾಖೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಸಾರ್ವಜನಿಕರು ಸಭೆಯ ಗಮನಕ್ಕೆ ತಂದರು. ಈ ವೇಳೆ ಸಭೆಗೆ ಅಬಕಾರಿ ಇಲಾಖೆಯ ಅಧಿಕಾರಿಗಳು ಗೈರಾಗಿರುವುದನ್ನು ಗಮನಿಸಿದ ರೈತ ಸಂಘದ ತಾಲೂಕು ಅಧ್ಯಕ್ಷ ಕುಮಾರ್, ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಆಯೋಜಿಸಿರುವ ಪ್ರಜಾಸೇವಾ ಆಂದೋಲನ ಕಾರ್ಯಕ್ರಮಕ್ಕೂ ಸಂಬಂಧಪಟ್ಟ ಅಧಿಕಾರಿಗಳು ಗೈರಾಗಿರುವುದು ನಿರ್ಲಕ್ಷ್ಯದ ಧೋರಣೆ–ಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವಿಭಾಗದ ಅಳತೆಗೆ ವಿಳಂಬ

ಸುಭಾನ್ ವುಲ್ಲ ಮಾತನಾಡಿ, ಪಾಲು ವಿಭಾಗಕ್ಕೆ ಸಂಬಂಧಿಸಿದಂತೆ 2025ರಲ್ಲಿ ಜಮೀನಿನ ಅಳತೆ ಮಾಡಿ ನ್ಯಾಯ ಒದಗಿಸುವಂತೆ ಪಿಡಿಒಗೆ ಆದೇಶವಾಗಿದ್ದರೂ ಈವರೆಗೆ ಅಳತೆ ಕಾರ್ಯ ಕೈಗೊಂಡಿಲ್ಲ ಎಂದು ದೂರಿದರು.

ಇದಕ್ಕೆ ಪ್ರತಿಕ್ರಿಯಿಸಿದ ಇಒ ಕೆಂಚಪ್ಪ, ದಿಶಾ ಆ್ಯಪ್ ಮೂಲಕ ಪರಿಶೀಲಿಸಿದಾಗ ಈ ಪ್ರಕರಣವು ಸರ್ವೆ ಇಲಾಖೆಯ ವ್ಯಾಪ್ತಿಗೆ ಬರುವುದಾಗಿ ತಿಳಿದುಬಂದಿದೆ. ಈ ಕುರಿತು ತಹಶೀಲ್ದಾರ್ ಅವರೊಂದಿಗೆ ಚರ್ಚಿಸಲಾಗಿದ್ದು, ಸರ್ವೆ ಕಾರ್ಯ ಕೈಗೊಳ್ಳಲು ಕ್ರಮ ವಹಿಸಲಾಗುವುದು ಎಂದರು.

ಅರಸಿನಗುಂಡಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಹಲವು ದಿನಗಳಿಂದ



ಕಾಡುತ್ತಿದ್ದು, ಅನೇಕ ಬಾರಿ ಸಂಬಂಧಪಟ್ಟ ಇಲಾಖೆಯ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ ಎಂದು ಗ್ರಾಮದ ಅಜೇಯ್ ದೂರಿದರು.

ಇದಕ್ಕೆ ಪ್ರತಿಕ್ರಿಯಿಸಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಸಾಧಿಕ್ ಉಲ್ಲಾ, ಗ್ರಾಮದಲ್ಲಿ ಕೆಲವೇ ದಿನಗಳಲ್ಲಿ ಕೊಳವೆಬಾವಿ ಕೊರೆಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ರೇಡಿಯಾಲಜಿ ತಂತ್ರಜ್ಞರ ಮೂಲಕ ಸ್ಕ್ಯಾನಿಂಗ್ ವ್ಯವಸ್ಥೆ ಕಲ್ಪಿಸಬೇಕು. ಹೆಚ್ಚುವರಿ ಆಂಬ್ಯುಲೆನ್ಸ್ ಸೇವೆ ಒದಗಿಸಬೇಕು. ಅಪಘಾತ ಹಾಗೂ ತುರ್ತು ಸಂದರ್ಭಗಳಲ್ಲಿ ರಜಾದಿನಗಳಲ್ಲಿಯೂ ಎಕ್ಸ್‌ರೇ ಸೌಲಭ್ಯ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಸಾಮಾಜಿಕ ಹೋರಾಟಗಾರ ದೊಡ್ಡಬೊಮ್ಮನಹಳ್ಳಿ ಬಸವರಾಜ್ ಒತ್ತಾಯಿಸಿದರು. ರೈತ ಮುಖಂಡ ಕುಮಾರ್ ಕೂಡ ಈ ಬೇಡಿಕೆಗಳಿಗೆ ಧ್ವನಿಗೂಡಿಸಿದರು.

ತಾಲೂಕು ಆರೋಗ್ಯಾಧಿಕಾರಿ ಡಾ. ವಿಶ್ವನಾಥ್ ಪ್ರತಿಕ್ರಿಯಿಸಿ, ಜಿಬಿಟಿ ಕಂಪನಿಯ ಏಜೆನ್ಸಿ ಮೂಲಕ 30 ಕಿ.ಮೀ. ವ್ಯಾಪ್ತಿಗೆ ಒಂದರಂತೆ ಒಟ್ಟು ಐದು ಆಂಬ್ಯುಲೆನ್ಸ್‌ಗಳು ಸೇವೆ ನೀಡುತ್ತಿವೆ. ಹೆಚ್ಚುವರಿಯಾಗಿ ಮಲ್ಲಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಗೆ ಆಂಬ್ಯುಲೆನ್ಸ್ ಸೌಲಭ್ಯ ಕಲ್ಪಿಸುವಂತೆ ಜಿಲ್ಲಾ ಆರೋಗ್ಯಾಧಿಕಾರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ರೇಡಿಯಾಲಜಿಸ್ಟ್ ಹಾಗೂ ಚರ್ಮರೋಗ ತಜ್ಞರ ಹುದ್ದೆಗಳು ಖಾಲಿಯಿದ್ದು, ಈ ಕುರಿತು ಜಿಲ್ಲಾ ಆರೋಗ್ಯಾಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದರು.

ಮಕ್ಕಳ ಪ್ರತಿಭೆ, ಸೃಜನಶೀಲತೆಗೆ ವೇದಿಕೆ ಕಲ್ಪಿಸುವುದು ಅಗತ್ಯ: ಶಿಕ್ಷಕರ ಅಭಿಮತ

“ಮುಂಜಾನೆಯ ಮೆರಗು”

ಜಗಳೂರು ನ, 14– ಪಟ್ಟಣದ ಜೆ.ಎಂ. ಇಮಾಂ ಸ್ಮಾರಕ ಶಾಲೆಯಲ್ಲಿ ಮಕ್ಕಳ ದಿನಾಚರಣೆಯನ್ನು ಸಂಭ್ರಮ, ಸಡಗರ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಭಾರತದ ಪ್ರಥಮ ಪ್ರಧಾನಮಂತ್ರಿ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮದಿನವನ್ನು ಸ್ಮರಿಸಿ, ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಬಳಿಕ ಮಕ್ಕಳಿಗೆ ಮಕ್ಕಳ ದಿನಾಚರಣೆ–ಯ ಶುಭಾಶಯಗಳನ್ನು ತಿಳಿಸಿ, ಮಕ್ಕಳ ಹಕ್ಕುಗಳು, ಕರ್ತವ್ಯಗಳು, ಶಿಕ್ಷಣದ ಮಹತ್ವ ಹಾಗೂ ಭವಿಷ್ಯದ ಜವಾಬ್ದಾರಿಗಳ ಕುರಿತು ಅರಿವು ಮೂಡಿಸಲಾಯಿತು.

ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ವಿದ್ಯಾರ್ಥಿಗಳಲ್ಲಿಯೇ ನಾಯಕತ್ವದ ಗುಣಗಳನ್ನು ಬೆಳೆಸುವ ಉದ್ದೇಶದಿಂದ ಮಕ್ಕಳನ್ನೇ ವೇದಿಕೆಯ ಮೇಲೆ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಅತಿಥಿಗಳನ್ನಾಗಿ ಆಯ್ಕೆ ಮಾಡಿ ಕಾರ್ಯಕ್ರಮವನ್ನು ನಡೆಸಿದ್ದು ಗಮನ ಸೆಳೆಯಿತು.

ಅದರಂತೆ 10ನೇ ತರಗತಿಯ ಕು. ಮಾನಸ ಜಿ.ಕೆ. ಅವರನ್ನು ಅಧ್ಯಕ್ಷರನ್ನಾಗಿ, 9ನೇ ತರಗತಿಯ ಕು. ಪಾವನಿ ಅವರನ್ನು ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು. ಅಲ್ಲದೆ, ವಿವಿಧ ತರಗತಿಗಳ ವಿದ್ಯಾರ್ಥಿಗಳನ್ನು ಅತಿಥಿಗಳನ್ನಾಗಿ ಆಹ್ವಾನಿಸಿ ಅವರಿಗೆ ವೇದಿಕೆಯಲ್ಲಿ ಮಾತನಾಡುವ ಅವಕಾಶ ಕಲ್ಪಿಸಲಾಯಿತು. ಈ ಮೂಲಕ ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ, ವೇದಿಕೆ ನಿರ್ವಹಣೆ ಹಾಗೂ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಬೆಳೆಸುವ ಪ್ರಯತ್ನ ಮಾಡಲಾಯಿತು.

ಮಕ್ಕಳು ತಮ್ಮ ಭವಿಷ್ಯದ ಕನಸುಗಳು, ಗುರಿಗಳು ಹಾಗೂ ಸಾಧನೆಯ ಹಾದಿಯ ಕುರಿತು ಅಭಿಪ್ರಾಯಗಳನ್ನು ಹಂಚಿಕೊಂಡರು. ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಉತ್ಸಾಹದಿಂದ ಭಾಗವಹಿಸಿ ನೃತ್ಯ, ಗಾಯನ ಸೇರಿದಂತೆ ತಮ್ಮಲ್ಲಿರುವ ಪ್ರತಿಭೆಯನ್ನು ಅನಾವರಣಗೊಳಿಸುವ ಮೂಲಕ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದರು.



ಈ ಸಂದರ್ಭದಲ್ಲಿ ಶಿಕ್ಷಕರು ಮಕ್ಕಳಿಗೆ ಶುಭ ಹಾರೈಸಿ, ಪ್ರತಿಯೊಂದು ಮಗುವಿನಲ್ಲಿಯೂ ಒಂದೊಂದು ವಿಶಿಷ್ಟ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಸೂಕ್ತ ಪ್ರೋತ್ಸಾಹ ಹಾಗೂ ಮಾರ್ಗದರ್ಶನ ನೀಡಿದಾಗ ಮಕ್ಕಳು ಭವಿಷ್ಯದಲ್ಲಿ ಉತ್ತಮ ಸಾಧಕರಾಗಿ ರೂಪುಗೊಳ್ಳಲು ಸಾಧ್ಯ. ಮಕ್ಕಳಿಗೆ ಪಠ್ಯದ ಜೊತೆಗೆ ಸಾಂಸ್ಕೃತಿಕ, ಕ್ರೀಡೆ ಹಾಗೂ ನಾಯಕತ್ವದ ಚಟುವಟಿಕೆಗಳಲ್ಲಿಯೂ ಅವಕಾಶ ಕಲ್ಪಿಸಬೇಕು ಎಂಬ ಆಶಯ ವ್ಯಕ್ತಪಡಿಸಿದರು.

ಮಕ್ಕಳ ಮುಖದಲ್ಲಿ ಸಂತಸದ ನಗು ಮೂಡಿಸಿದ ಈ ಕಾರ್ಯಕ್ರಮವು ವಿದ್ಯಾರ್ಥಿಗಳು ಹಾಗೂ ಶಿಕ್ಷಕರಲ್ಲಿ ಉತ್ಸಾಹ ತುಂಬಿ, ಮಕ್ಕಳ ದಿನಾಚರಣೆ–ಯ ಮಹತ್ವವನ್ನು ಸಾರುವ ಅರ್ಥಪೂರ್ಣ ಆಚರಣೆಯಾಗಿ ಮೂಡಿಬಂದಿತು.

ಕಾರ್ಯಕ್ರಮದಲ್ಲಿ ಶಾಲೆಯ ಹಿರಿಯ ಶಿಕ್ಷಕರಾದ ಎಸ್. ಹಾಲಪ್ಪ, ಆಡಳಿತಾಧಿಕಾರಿ ಜೆ.ಕೆ. ಮಹಮ್ಮದ್ ಹುಸೇನ್, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ವಿಜಯಲಕ್ಷ್ಮಿ ಎಸ್.ಎಂ., ಪ್ರೌಢಶಾಲೆಯ ಮುಖ್ಯ ಶಿಕ್ಷಕ ಶಂಕರ್ ಜೆ.ಆರ್., ಹಿರಿಯ ಶಿಕ್ಷಕಿ ಶಿಲ್ಪಾ ಎಂ., ಸೀಮಾ ತಬಸ್ಸುಮ್, ಎಸ್.ಐ. ಹಾಗೂ ಮೇಲ್ವಿಚಾರಕ ನಾಗರಾಜ್ ಬಿ.ಟಿ. ಸೇರಿದಂತೆ ಶಾಲೆಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ದೇವರ ದರ್ಶನ ಪಡೆದು ನಾಡಿನ ಸುಖ, ಶಾಂತಿ, ಸಮೃದ್ಧಿಗಾಗಿ ಪ್ರಾರ್ಥನೆ: ಕೆ.ಪಿ. ಪಾಲಯ್ಯ

“ಮುಂಜಾನೆಯ ಮೆರಗು”

ಜಗಳೂರು ನ, 14– ತಾಲ್ಲೂಕಿನ ಹಿರೇಮಲ್ಲನಹೋಳೆ ಗೊಲ್ಲರಹಟ್ಟಿ ಗ್ರಾಮದಲ್ಲಿ ಆಯೋಜಿಸಲಾಗಿದ್ದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಕೆಪಿಸಿಸಿ ಎಸ್‌ಟಿ ವಿಭಾಗದ ಮಾಜಿ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ ಅವರು ಭಾಗವಹಿಸಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.



ಗ್ರಾಮದಲ್ಲಿ ಧಾರ್ಮಿಕ ಭಕ್ತಿಭಾವದ ವಾತಾವರಣದಲ್ಲಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಅವರು, ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ನಾಡಿನ ಜನತೆಗೆ ಸುಖ, ಶಾಂತಿ, ನೆಮ್ಮದಿ ಹಾಗೂ ಸಮೃದ್ಧಿ ಕರುಣಿಸುವಂತೆ ಪ್ರಾರ್ಥಿಸಿದರು.

ನಂತರ ಗ್ರಾಮದ ಮುಖಂಡರು, ಹಿರಿಯರು ಹಾಗೂ ಗ್ರಾಮಸ್ಥರೊಂದಿಗೆ ಆತ್ಮೀಯವಾಗಿ ಬೆರೆತ ಅವರು, ಗ್ರಾಮಸ್ಥರ ಯೋಗಕ್ಷೇಮ ವಿಚಾರಿಸಿ ಕುಶಲೋಪರಿ ನಡೆಸಿದರು. ಈ ಸಂದರ್ಭದಲ್ಲಿ ಗ್ರಾಮಸ್ಥರು ಅವರೊಂದಿಗೆ ಆತ್ಮೀಯವಾಗಿ ಮಾತನಾಡಿ ಸಂತಸ ಹಂಚಿಕೊಂಡರು.

ಸಾರ್ವಜನಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಗ್ರಾಮೀಣ ಜನರೊಂದಿಗೆ ನಿರಂತರ ಸಂಪರ್ಕ ಹೊಂದಿರುವ ಕೆ.ಪಿ. ಪಾಲಯ್ಯ ಅವರು, ಜನರ ಭಾವನೆಗಳಿಗೆ ಸ್ಪಂದಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ.

ಮಕ್ಕಳಲ್ಲಿ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸುವುದು ಅಗತ್ಯ: ಎನ್.ಎಂ. ಲೋಕೇಶ್

“ಮುಂಜಾನೆಯ ಮೆರಗು”

ಜಗಳೂರು ನ, 14– ಮಕ್ಕಳಲ್ಲಿ ಉತ್ತಮ ಸಂಸ್ಕಾರ, ಶಿಸ್ತು, ಮಾನವೀಯ ಮೌಲ್ಯಗಳು ಹಾಗೂ ದೇಶಪ್ರೇಮದ ಗುಣಗಳನ್ನು ಬೆಳೆಸುವಲ್ಲಿ ಶಿಕ್ಷಕರು ಮತ್ತು ಪೋಷಕರ ಪಾತ್ರ ಮಹತ್ವದ್ದಾಗಿದೆ ಎಂದು ಎನ್.ಎಂ.ಕೆ. ಶಾಲೆಯ ಕಾರ್ಯದರ್ಶಿ ಎನ್.ಎಂ. ಲೋಕೇಶ್ ಹೇಳಿದರು.



ಪಟ್ಟಣದ ಎನ್.ಎಂ.ಕೆ. ಶಾಲೆಯಲ್ಲಿ ಶನಿವಾರ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಭಾರತದ ಮೊದಲ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಮಕ್ಕಳು ದೇಶದ ಭವಿಷ್ಯದ ಅಮೂಲ್ಯ ಸಂಪತ್ತಾಗಿದ್ದು, ಅವರ ಪ್ರತಿಭೆ, ಆಸಕ್ತಿ ಮತ್ತು ಸೃಜನಶೀಲತೆಯನ್ನು ಗುರುತಿಸಿ ಪ್ರೋತ್ಸಾಹಿಸಬೇಕು. ಶಿಕ್ಷಣದ ಜೊತೆಗೆ ಉತ್ತಮ ನಡತೆ, ಆತ್ಮವಿಶ್ವಾಸ ಮತ್ತು ಸಾಮಾಜಿಕ ಜವಾಬ್ದಾರಿಯ ಗುಣಗಳನ್ನು ಬೆಳೆಸುವ ಮೂಲಕ ಅವರನ್ನು ಉತ್ತಮ ನಾಗರಿಕರನ್ನಾಗಿ ರೂಪಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳೇ ಅಧ್ಯಕ್ಷರು, ಅತಿಥಿಗಳಾಗಿ ವೇದಿಕೆ ಹಂಚಿಕೊಂಡ ಮಕ್ಕಳ ದಿನಾಚರಣೆ

“ಮುಂಜಾನೆಯ ಮೆರಗು”

ಜಗಳೂರು ನ, 14– ತಾಲೂಕಿನ ಹಿರೇಮಲ್ಲನಹೊಳೆ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳ ದಿನಾಚರಣೆಯನ್ನು ವಿನೂತನ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮಕ್ಕಳಲ್ಲಿ ನಾಯಕತ್ವ ಗುಣ, ಆತ್ಮವಿಶ್ವಾಸ ಹಾಗೂ ವೇದಿಕೆ ನಿರ್ವಹಣಾ ಕೌಶಲ ಬೆಳೆಸುವ ಉದ್ದೇಶದಿಂದ ಕಾರ್ಯಕ್ರಮದಲ್ಲಿ ಶಾಲೆಯ ವಿದ್ಯಾರ್ಥಿಗಳಿಗೇ ಅಧ್ಯಕ್ಷತೆ, ಉದ್ಘಾಟನೆ ಹಾಗೂ ಮುಖ್ಯ ಅತಿಥಿಗಳ ಸ್ಥಾನವನ್ನು ನೀಡುವ ಮೂಲಕ ವಿಶೇಷವಾಗಿ ಆಚರಿಸಿದ್ದು ಗಮನ ಸೆಳೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ 10ನೇ ತರಗತಿ ವಿದ್ಯಾರ್ಥಿ ಬಸವರಾಜ್ ಮಾತನಾಡಿ, ಮಕ್ಕಳ ದಿನಾಚರಣೆ ಮಕ್ಕಳ



ಪ್ರತಿಭೆ, ಸಾಮರ್ಥ್ಯ ಹಾಗೂ ಕನಸುಗಳನ್ನು ಗುರುತಿಸುವ ದಿನವಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಉತ್ತಮ ಶಿಕ್ಷಣ ಪಡೆದು ಭವಿಷ್ಯದಲ್ಲಿ ಜವಾಬ್ದಾರಿಯುತ ನಾಗರಿಕನಾಗಿ ರೂಪುಗೊಳ್ಳಬೇಕು. ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಹೊರತರುವಲ್ಲಿ ಶಿಕ್ಷಕರು ಹಾಗೂ ಪೋಷಕರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಸರ್ಕಾರಿ ಶಾಲೆಯ ಮುಖ್ಯಶಿಕ್ಷಕ ತೊಟಗಂಟಿ ಪ್ರಕಾಶ್ ಮಾತನಾಡಿ, ಮಕ್ಕಳ ದಿನಾಚರಣೆಯು ಮಕ್ಕಳ ಹಕ್ಕುಗಳು, ಶಿಕ್ಷಣದ ಮಹತ್ವ ಹಾಗೂ ಅವರ ಸರ್ವತೋಮುಖ ಬೆಳವಣಿಗೆಯನ್ನು ನೆನಪಿಸುವ ವಿಶೇಷ ದಿನವಾಗಿದೆ. ವಿದ್ಯಾರ್ಥಿಗಳು ಕೇವಲ ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆ ಹಾಗೂ ಸಾಮಾಜಿಕ ಕಾರ್ಯಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಒಂದೊಂದು ವಿಶೇಷ ಪ್ರತಿಭೆ ಇರುತ್ತದೆ. ಅದನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳೇ ಕಾರ್ಯಕ್ರಮದ ಪ್ರಮುಖ ಸ್ಥಾನಗಳನ್ನು ಅಲಂಕರಿಸುವ ಮೂಲಕ ಮಕ್ಕಳಲ್ಲಿ ನಾಯಕತ್ವದ ಗುಣ ಬೆಳೆಸುವ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತವಾಯಿತು. ಕಾರ್ಯಕ್ರಮದಲ್ಲಿ ಶಾಲೆ